Akashvani : Bangalore
National Bulletin In Kannada
13.07.2024 / 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು:

೧. ಪ್ರಧಾನಿ ನರೇಂದ್ರ ಮೋದಿ ಇಂದು ಮಹಾರಾಷ್ಟ್ರಕ್ಕೆ ಭೇಟಿ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

೨. ಐಐಟಿ ದೆಹಲಿ ಮತ್ತು ಪ್ರಸಾರ ಭಾರತಿ ವತಿಯಿಂದ ಇಂದು ಡಿಡಿ ರೊಬೊಕಾನ್ -೨೦೨೪ ಕಾರ್ಯಕ್ರಮ

೩. ತಮಿಳುನಾಡಿಗೆ ಕಾವೇರಿ ನೀರು ಹಂಚಿಕೆ; ನಾಳೆ ಕರ್ನಾಟಕದಲ್ಲಿ ಸರ್ವಪಕ್ಷಗಳ ಸಭೆ

೪. ಟಿ-೨೦ ಕ್ರಿಕೆಟ್: ಇಂದು ಸಂಜೆ ಹರಾರೆಯಲ್ಲಿ ಭಾರತ-ಜಿಂಬಾಬ್ವೆ ಹಣಾಹಣಿ

*****

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮುಂಬೈ, ಮಹಾರಾಷ್ಟ್ರಕ್ಕೆ ಭೇಟಿ ನೀಡಲಿದ್ದಾರೆ. ಗೋರೆಗಾಂವ್‌ನ ನೆಸ್ಕೋ ವಸ್ತುಪ್ರದರ್ಶನ ಕೇಂದ್ರದಲ್ಲಿ ೨೯ ಸಾವಿರದ ೪೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ರಸ್ತೆ, ರೈಲ್ವೆ ಮತ್ತು ಬಂದರು ವಲಯಕ್ಕೆ ಸಂಬಂಧಿಸಿದ ಬಹು ಯೋಜನೆಗಳಿಗೆ ಚಾಲನೆ ನೀಡಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ ಮತ್ತು ಕೆಲವು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಸಂಜೆ, ಪ್ರಧಾನಿ ಅವರು ಐಎನ್‌ಎಸ್ ಟವರ್ಸ್‌ಅನ್ನು ಉದ್ಘಾಟಿಸಲು ಭಾರತೀಯ ಸುದ್ದಿ ಸೇವಾ ಸಚಿವಾಲಯಕ್ಕೆ ಭೇಟಿ ನೀಡಲಿದ್ದಾರೆ. ೧೬ ಸಾವಿರದ ೬೦೦ ಕೋಟಿ ರೂಪಾಯಿ ಮೌಲ್ಯದ ಥಾಣೆ ಬೊರಿವಲಿ ಸುರಂಗ ಯೋಜನೆಗೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಥಾಣೆ ಮತ್ತು ಬೊರಿವಲಿ ನಡುವಿನ ಈ ಟ್ವಿನ್ ಟ್ಯೂಬ್ ಸುರಂಗ ಸಂಜಯ್ ಗಾಂಧಿ ರಾಷ್ಟ್ರೀಯ ಉದ್ಯಾನವನದ ಕೆಳಗೆ ಹಾದುಹೋಗುತ್ತದೆ, ಯೋಜನೆಯ ಒಟ್ಟು ಉದ್ದ ೧೧.೮ ಕಿಲೋಮೀಟರ್ ಇದು ಥಾಣೆಯಿಂದ ಬೊರಿವಲಿಗೆ ೧೨ ಕಿಮೀ ಪ್ರಯಾಣವನ್ನು ಕಡಿಮೆ ಮಾಡುತ್ತದೆ ಮತ್ತು ಪ್ರಯಾಣದ ಸಮಯದಲ್ಲಿ ಸುಮಾರು ೧ ಗಂಟೆ ಉಳಿತಾಯವಾಗುತ್ತದೆ. ಗೋರೆಗಾಂವ್ ಮುಲುಂಡ್ ಲಿಂಕ್ ರೋಡ್ ಯೋಜನೆಯಲ್ಲಿ ಸುಮಾರು ೬೩೦೦ ಕೋಟಿ ರೂಪಾಯಿಗಳ ಸುರಂಗ ಕಾಮಗಾರಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಅವರು ನವಿ ಮುಂಬೈನ ಟರ್ಭೆಯಲ್ಲಿ ಕಲ್ಯಾಣ್ ಯಾರ್ಡ್ ಮರುನಿರ್ಮಾಣ ಮತ್ತು ಗತಿ ಶಕ್ತಿ ಮಲ್ಟಿ ಮಾದರಿ ಕಾರ್ಗೋ ಟರ್ಮಿನಲ್‌ಗೆ ಅಡಿಪಾಯ ಹಾಕಲಿದ್ದಾರೆ. ಲೋಕಮಾನ್ಯ ತಿಲಕ್ ಟರ್ಮಿನಸ್ ಮತ್ತು ಪ್ಲಾಟ್‌ಫಾರ್ಮ್ ಸಂಖ್ಯೆ ವಿಸ್ತರಣೆಯಲ್ಲಿ ಹೊಸ ಪ್ಲಾಟ್‌ಫಾರ್ಮ್‌ಗಳನ್ನು ಪ್ರಧಾನಿ ಅವರು ರಾಷ್ಟ್ರಕ್ಕೆ ಅರ್ಪಿಸಲಿದ್ದಾರೆ. ಪ್ರಧಾನಮಂತ್ರಿಯವರು ಸುಮಾರು ೫೬೦೦ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮುಖ್ಯಮಂತ್ರಿ ಯುವ ಕಾರ್ಯ ಪ್ರಶಿಕ್ಷಣ

ಯೋಜನೆಗೆ ಚಾಲನೆ ನೀಡಲಿದ್ದಾರೆ. ಇದು ಪರಿವರ್ತಕ ಇಂಟರ್ನ್‌ಶಿಪ್ ಕಾರ್ಯಕ್ರಮವಾಗಿದ್ದು, ೧೮ ರಿಂದ ೩೦ ವರ್ಷ ವಯಸ್ಸಿನ ಯುವಕರಿಗೆ ಕೌಶಲ್ಯ ವರ್ಧನೆ ಮತ್ತು ಉದ್ಯಮದ ಮಾನ್ಯತೆಗೆ ಅವಕಾಶಗಳನ್ನು ಒದಗಿಸುವ ಮೂಲಕ ನಿರುದ್ಯೋಗವನ್ನು ಪರಿಹರಿಸುವ ಗುರಿ ಹೊಂದಿದೆ.

*****

ಐಐಟಿದೆಹಲಿ ಮತ್ತು ಪ್ರಸಾರ ಭಾರತಿ ಇಂದಿನಿಂದ ದೆಹಲಿಯ ತ್ಯಾಗರಾಜ್ ಕ್ರೀಡಾಂಗಣದಲ್ಲಿ ಎರಡು ದಿನಗಳ ರೋಬೋಟ್ ಸ್ಪರ್ಧೆ ಡಿಡಿ ರೊಬೊಕಾನ್ -೨೦೨೪ ಅನ್ನು ಆಯೋಜಿಸಿದೆ. ಈ ಕಾರ್ಯಕ್ರಮದಲ್ಲಿ ದೇಶದ ೪೫ಕ್ಕೂ ಹೆಚ್ಚು ಕಾಲೇಜುಗಳು, ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯಗಳಿಂದ ೭೫೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಡಿಡಿ ರೊಬೊಕಾನ್‌ನಿಂದ ವಿಜೇತ ತಂಡವು ವಿಯೆಟ್ನಾಂನ **QuangNinh** ನಲ್ಲಿ ನಡೆಯುವ ಅಂತರಾಷ್ಟ್ರೀಯ ಏಷ್ಯಾ-ಪೆಸಿಫಿಕ್ ಬ್ರಾಡ್‌ಕಾಸ್ಟಿಂಗ್ ಯೂನಿಯನ್ ರೋಬೋಕಾನ್ ೨೦೨೪ರಲ್ಲಿ ಭಾರತವನ್ನು ಪ್ರತಿನಿಧಿಸುತ್ತದೆ. ರೊಬೊಟಿಕ್ಸ್ ಕ್ಷೇತ್ರದಲ್ಲಿ ಪ್ರಗತಿ ಮತ್ತು ಮನ್ನಣೆಯನ್ನು ಒದಗಿಸುವ ನಿಟ್ಟಿನಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿಗಳಲ್ಲಿ ತಾಂತ್ರಿಕ ಕೌಶಲ್ಯ ಅಭಿವೃದ್ಧಿ, ನಾವೀನ್ಯತೆ ಮತ್ತು ಟೀಮ್‌ವರ್ಕ್ ಅನ್ನು ಉತ್ತೇಜಿಸುವ ಗುರಿಯನ್ನು ಡಿಡಿ-ರೊಬೊಕಾನ್ ಇಂಡಿಯಾ ಹೊಂದಿದೆ ಎಂದು ಐಐಟಿ-ದೆಹಲಿ ಪ್ರಕಟಣೆಯಲ್ಲಿ ತಿಳಿಸಿದೆ. ವಿದ್ಯಾರ್ಥಿಗಳ ಎಂಜಿನಿಯರಿಂಗ್ ಮತ್ತು ರೊಬೊಟಿಕ್ಸ್ ಸಾಮರ್ಥ್ಯಗಳನ್ನು ಪ್ರದರ್ಶಿಸಲು ಮತ್ತು ಮುನ್ನಡೆಸಲು ಈ ಸ್ಪರ್ಧೆ ಅತ್ಯುತ್ತಮ ವೇದಿಕೆಯಾಗಿದೆ.

*****

ಏಳು ರಾಜ್ಯಗಳ ೧೩ ವಿಧಾನಸಭಾ ಸ್ಥಾನಗಳಿಗೆ ನಡೆದ ಉಪಚುನಾವಣೆಯ ಮತ ಎಣಿಕೆ ಇಂದು ನಡೆಯಲಿದೆ. ಪಶ್ಚಿಮ ಬಂಗಾಳದ ರಾಯಗಂಜ್, ರಣಘಾಟ್ ದಕ್ಷಿಣ್, ಬಾಗ್ದಾ ಮತ್ತು ಮಾಣಿಕ್ತಾಲಾ, ಹಿಮಾಚಲಪ್ರದೇಶದ ಡೆಹ್ರಾ, ಹಮೀರ್‌ಪುರ ಮತ್ತು ನಲಗಢ ಮತ್ತು ಉತ್ತರಾಖಂಡದ ಬದರಿನಾಥ್ ಮತ್ತು ಮಂಗಳೌರ್; ಬಿಹಾರದ ರೂಪೌಲಿ, ಮಧ್ಯಪ್ರದೇಶದ ಅಮರವಾರ, ತಮಿಳುನಾಡಿನ ವಿಕ್ರವಂಡಿ ಮತ್ತು ಪಂಜಾಬ್‌ನ ಜಲಂಧರ್ ಪಶ್ಚಿಮ ಕ್ಷೇತ್ರಗಳಿಗೆ ಕಳೆದ ಬುಧವಾರ ಮತದಾನ ನಡೆದಿತ್ತು.

*****

ಪ್ರತಿ ವರ್ಷ ಜೂನ್ ೨೫ ರಂದು 'ಸಂವಿಧಾನ ಹತ್ಯಾ ದಿನ' ಎಂದು ಆಚರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ೧೯೭೫ರಂದು ಈ ದಿನ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದರು. ಈ ಕುರಿತು ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ದಬ್ಬಾಳಿಕೆಯ ಸರ್ಕಾರದ ಕೈಯಲ್ಲಿ ವಿವರಿಸಲಾಗದ ಕಿರುಕುಳವನ್ನು ಎದುರಿಸುತ್ತಿದ್ದರೂ ಪ್ರಜಾಪ್ರಭುತ್ವವನ್ನು ಪುನರುಜ್ಜೀವನಗೊಳಿಸಲು ಹೋರಾಡಿದ ಲಕ್ಷಾಂತರ ಜನರ ಧೈರ್ಯವನ್ನು ಗೌರವಿಸಲು ಈ ನಿರ್ಧಾರ ಕೈಗೊಳ್ಳಲಾಗಿದೆ.

’ಸಂವಿಧಾನ್ ಹತ್ಯಾ ದಿವಸ್’ ಆಚರಣೆಯು ಪ್ರತಿಯೊಬ್ಬ ಭಾರತೀಯನಲ್ಲೂ ವೈಯಕ್ತಿಕ ಸ್ವಾತಂತ್ರ್ಯದ ಶಾಶ್ವತ ಜ್ವಾಲೆ ಮತ್ತು ದೇಶದ ಪ್ರಜಾಪ್ರಭುತ್ವದ ರಕ್ಷಣೆಯನ್ನು ಜೀವಂತವಾಗಿರಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ. ಭಾರತದ ಸಂವಿಧಾನದ ಕತ್ತು ಹಿಸುಕಿದಾಗ ಏನಾಗುತ್ತದೆ ಎಂಬುದನ್ನು ’ಸಂವಿಧಾನ ಹತ್ಯಾ ದಿನ’ ನೆನಪಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತೀಯ ಇತಿಹಾಸದ ಕರಾಳ ಘಟ್ಟವನ್ನು ಕಾಂಗ್ರೆಸ್ ಬಿಚ್ಚಿಟ್ಟಿದೆ. ಈ ದಿನವು ತುರ್ತು ಪರಿಸ್ಥಿತಿಯ ಕಾರಣದಿಂದ ನೋವು ಅನುಭವಿಸಿದ ಪ್ರತಿಯೊಬ್ಬ ವ್ಯಕ್ತಿಗೆ ಗೌರವ ಸಲ್ಲಿಸುವ ದಿನವಾಗಿದೆ ಎಂದು ಅವರು ಹೇಳಿದ್ದಾರೆ.

*****

ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿ ನಿನ್ನೆ ಸಚಿವರು  ಮತ್ತು ಅಧಿಕಾರಿಗಳ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿ ರಾಜ್ಯದಲ್ಲಿ ವಾಡಿಕೆಯ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದರೂ ಸಹ ಇದುವರೆಗೆ ಜಲಾಶಯಗಳಿಗೆ ಶೇಕಡ ೨೮ ರಷ್ಟು ಒಳಹರಿವಿನ ಕೊರತೆಯಿದೆ. ಇದನ್ನು ಕಾವೇರಿ ಸಮಿತಿಗೆ ತಿಳಿಸಲಾಗಿತ್ತು. ಈ ತಿಂಗಳ ಅಂತ್ಯದವರೆಗೂ ಯಾವುದೇ ಆದೇಶ ನೀಡಬಾರದು ಎಂದು ಮನವಿ ಮಾಡಲಾಗಿತ್ತು. ಆದರೂ, ಇಂದಿನಿಂದ ತಮಿಳುನಾಡಿಗೆ ಪ್ರತಿದಿನ ಒಂದು ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಸಮಿತಿ ಸೂಚಿಸಿದೆ. ಇದನ್ನು ಪ್ರಶ್ನಿಸಿ ಕಾವೇರಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಬೇಕು ಎಂದು ಇಂದು ನಡೆದ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಹೇಳಿದರು. ನಾಳೆ ಸಂಜೆ ೪ ಗಂಟೆಗೆ ಸರ್ವಪಕ್ಷ ಸಭೆ ನಡೆಸಲು ತೀರ್ಮಾನಿಸಲಾಗಿದೆ. ರಾಜ್ಯದ ನೀರಿನ ವಿಚಾರದಲ್ಲಿ ಎಲ್ಲ ಪಕ್ಷಗಳೂ ಸಹಮತ ಹೊಂದಿವೆ. ಕೇಂದ್ರ ಸಚಿವರು, ಕಾವೇರಿ ಭಾಗದ ಸಂಸದರು ಮತ್ತು ಶಾಸಕರನ್ನು ಸಭೆಗೆ ಆಹ್ವಾನಿಸಲಾಗುವುದು. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸರ್ಕಾರ ಮುಂದಿನ ತೀರ್ಮಾನ ಮಾಡಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

*****

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ದೆಹಲಿಯಲ್ಲಿ ಥಾಯ್ಲೆಂಡ್‌ನ ವಿದೇಶಾಂಗ ಸಚಿವ ಮಾರಿಸ್ ಸಾಂಗಿಯಂಪಾಂಗ್ಸಾ ಅವರೊಂದಿಗೆ ಮಾತುಕತೆ ನಡೆಸಿದರು, ಈ ಭೇಟಿಯ ಸಂದರ್ಭದಲ್ಲಿ ರಾಜಕೀಯ, ರಕ್ಷಣೆ ಮತ್ತು ಭದ್ರತೆ, ವ್ಯಾಪಾರ ಮತ್ತು ಹೂಡಿಕೆ, ಭೌತಿಕ ಮತ್ತು ಆರ್ಥಿಕ ಸಂಪರ್ಕ, ಪ್ರವಾಸೋದ್ಯಮ ಮತ್ತು ಜನರ ವಿಚಾರಗಳ ಬಗ್ಗೆ ಚರ್ಚೆ ನಡೆಸಲಾಯಿತು.

*****

ಭಾರತ-ಜಿಂಬಾಬ್ವೆ ನಡುವಿನ ಐದು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ನಾಲ್ಕನೇ ಪಂದ್ಯ ಇಂದು ಸಂಜೆ ಹರಾರೆಯಲ್ಲಿ ಜರುಗಲಿದೆ. ಶುಬ್ಮನ್‌ಗಿಲ್ ನಾಯಕತ್ವದಲ್ಲಿ ಭಾರತ ಪ್ರಸ್ತುತ ಸರಣಿಯಲ್ಲಿ ೨-೧ ಮುನ್ನಡೆ ಸಾಧಿಸಿದೆ. ಸರಣಿಯ ಆರಂಭಿಕ ಪಂದ್ಯದಲ್ಲಿ ಜಿಂಬಾಬ್ವೆ ಭಾರತದ ವಿರುದ್ಧ ೧೩ ರನ್‌ಗಳ ಜಯ ಸಾಧಿಸಿತ್ತು. ಆದರೆ, ಮುಂದಿನ ಎರಡು ಪಂದ್ಯಗಳಲ್ಲಿ ಹಾಲಿ ಟಿ-೨೦ ವಿಶ್ವ ಚಾಂಪಿಯನ್ ಭಾರತ ತಂಡ ತನ್ನ ಪ್ರಾಬಲ್ಯ ಮೆರೆದಿತ್ತು. ಎರಡನೇ ಪಂದ್ಯದಲ್ಲಿ ಆಕರ್ಷಕ ೧೦೦ ರನ್‌ಗಳ ಅಂತರದಿಂದ ಆತಿಥೇಯರ ವಿರುದ್ಧ ಜಯಗಳಿಸಿದ ಭಾರತ, ಮೂರನೇ ಟಿ-೨೦ ಪಂದ್ಯದಲ್ಲಿ ೨೩ ರನ್‌ಗಳ ಭರ್ಜರಿ ಗೆಲುವು ದಾಖಲಿಸಿತ್ತು. ಸರಣಿಯ ಅಂತಿಮ ಪಂದ್ಯ ನಾಳೆ ಇದೇ ಮೈದಾನದಲ್ಲಿ ನಡೆಯಲಿದೆ

*****

ವಿಂಬಲ್ಡನ್ ಟೆನಿಸ್ ಟೂರ್ನಿಯಲ್ಲಿಂದು ಲಂಡನ್‌ನಲ್ಲಿ ನಡೆಯಲಿರುವ ಮಹಿಳೆಯರ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಏಳನೇ ಶ್ರೇಯಾಂಕದ ಜಾಸ್ಮಿನ್ ಪಯೋಲಿನಿ, ೩೧ನೇ ಶ್ರೇಯಾಂಕದ ಬಾರ್ಬೋರಾ ಕ್ರೆಜ್ಸಿಕೋವಾ ಅವರನ್ನು ಎದುರಿಸಲಿದ್ದಾರೆ. ಗುರುವಾರ ನಡೆದ ಸೆಮಿಫೈನಲ್‌ನಲ್ಲಿ ಕಜಕಿಸ್ತಾನ್‌ನ ಎಲೆನಾ ರೈಬಾಕಿನಾ ವಿರುದ್ಧ ಜಯಗಳಿಸಿದ ನಂತರ ಜೆಕ್ ಗಣರಾಜ್ಯದ ಕ್ರೆಜ್ಸಿಕೋವಾ, ಇದೇ ಮೊದಲ ಬಾರಿಗೆ ವಿಂಬಲ್ಡನ್ ಫೈನಲ್‌ಗೆ ಪ್ರವೇಶಿಸಿದರು. ಇಟಲಿಯ ಪಾವೊಲಿನಿ ಸೆಮಿಫೈನಲ್‌ನಲ್ಲಿ ಕ್ರೊವೇಷಿಯಾದ ಡೊನ್ನಾ ವೆಕಿಕ್ ಅವರನ್ನು ಸೋಲಿಸಿ, ಫೈನಲ್‌ಗೆ ಲಗ್ಗೆ ಇಟ್ಟರು. ಪುರುಷರ ಸಿಂಗಲ್ಸ್‌ನಲ್ಲಿ ಏಳು ಬಾರಿಯ ಚಾಂಪಿಯನ್ ನೊವಾಕ್ ಜೊಕೊವಿಕ್ ಅವರು ನಾಳೆ ನಡೆಯಲಿರುವ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಕಾರ್ಲೋಸ್ ಅಲ್ಕರಾಜ್ ಅವರನ್ನು ಎದುರಿಸಲಿದ್ದಾರೆ. ಕಳೆದ ರಾತ್ರಿ ಲಂಡನ್‌ನಲ್ಲಿ ನಡೆದ ಪುರುಷರ ಸಿಂಗಲ್ಸ್ ಸೆಮಿಫೈನಲ್‌ನಲ್ಲಿ ಸೆರ್ಬಿಯಾದ ಜೊಕೊವಿಕ್, ೨೫ನೇ ಶ್ರೇಯಾಂಕದ ಇಟಲಿಯ ಲೊರೆಂಜೊ ಮುಸೆಟ್ಟಿ ವಿರುದ್ಧ ೬-೪, ೭-೬, ೬-೪ ನೇರ ಸೆಟ್‌ಗಳ ಗೆಲುವು ಸಾಧಿಸಿದರು. ಅಲ್ಕಾರಾಜ್ ಅವರು ಸೆಮಿಫೈನಲ್‌ನಲ್ಲಿ ರಷ್ಯಾದ ಡೇನಿಯಲ್ ಮೆಡ್ವೆಡೆವ್ ಅವರನ್ನು ೬-೭, ೬-೩, ೬-೪, ೬-೪ ಸೆಟ್‌ಗಳಿಂದ ಸೋಲಿಸಿ ಪಂದ್ಯಾವಳಿಯಲ್ಲಿ ತಮ್ಮ ಎರಡನೇ ನೇರ ಫೈನಲ್ ತಲುಪಿದರು. ಪುರುಷರ ಡಬಲ್ಸ್ ಪ್ರಶಸ್ತಿ ಹಣಾಹಣಿಯಲ್ಲಿ, ಬ್ರಿಟೀಷ್-ಫಿನ್ನಿಷ್ ಜೋಡಿ ಹೆನ್ರಿ ಪ್ಯಾಟನ್ ಮತ್ತು ಹ್ಯಾರಿ ಹೆಲಿಯೊವಾರಾ ಇಂದು ಸಂಜೆ ೧೫ನೇ ಶ್ರೇಯಾಂಕದ ಆಸ್ಟ್ರೇಲಿಯಾದ ಜೋಡಿ ಮ್ಯಾಕ್ಸ್ ಪರ್ಸೆಲ್ ಮತ್ತು ಜೋರ್ಡಾನ್ ಥಾಂಪ್ಸನ್ ಅವರೊಂದಿಗೆ ಸೆಣಸಲಿದ್ದಾರೆ. ಮಹಿಳೆಯರ ಡಬಲ್ಸ್‌ನಲ್ಲಿ ಎರಡನೇ ಶ್ರೇಯಾಂಕದ ಕೆನಡಾದ ಗ್ಯಾಬ್ರಿಯೆಲಾ ದಬ್ರೊವ್ಸ್ಕಿ ಮತ್ತು ನ್ಯೂಜಿಲೆಂಡ್‌ನ ಎರಿನ್ ರೌಟ್‌ಲಿಫ್ ಅವರು ನಾಲ್ಕನೇ ಶ್ರೇಯಾಂಕದ ಜೆಕ್ ಗಣರಾಜ್ಯದ ಕಟೆರಿನಾ ಸಿನಿಯಾಕೋವಾ ಮತ್ತು ಅಮೆರಿಕದ ಟೇಲರ್ ಟೌನ್‌ಸೆಂಡ್ ಅವರನ್ನು ಫೈನಲ್‌ನಲ್ಲಿ ಎದುರಿಸಲಿದ್ದಾರೆ. ಮಿಶ್ರ ಡಬಲ್ಸ್ ಫೈನಲ್‌ನಲ್ಲಿ ಏಳನೇ ಶ್ರೇಯಾಂಕದ ಪೋಲಿಷ್-ತೈವಾನ್ ಜೋಡಿಯಾದ ಜಾನ್ ಝಿಲಿಸ್ಕಿ ಮತ್ತು ಹ್ಸೀಹ್ ಸು-ವೀ ಅವರು ನಾಳೆ ಮೆಕ್ಸಿಕನ್ ಜೋಡಿ ಸ್ಯಾಂಟಿಯಾಗೊ ಗೊನ್ಜಾಲೆಜ್ ಮತ್ತು ಗಿಯುಲಿಯಾನಾ ಓಲ್ಮೋಸ್ ವಿರುದ್ಧ ಸೆಣಸಲಿದ್ದಾರೆ.

*****

ಇಟಲಿಯ ಪೋರ್ಪೆಟ್ಟೋದಲ್ಲಿ ನಡೆದ ಅಂತಾರಾಷ್ಟ್ರೀಯ ಶೂಟಿಂಗ್ ಸ್ಪೋರ್ಟ್ ಫೆಡರೇಶನ್-ಐ.ಎಸ್.ಎಸ್.ಎಫ್ ಜೂನಿಯರ್ ವಿಶ್ವಕಪ್ ಶೂಟಿಂಗ್ ಸ್ಪರ್ಧೆಯಲ್ಲಿ, ಭಾರತದ ಸಬೀರಾ ಹ್ಯಾರಿಸ್ ಮಹಿಳೆಯರ ಟ್ರ್ಯಾಪ್ ಸ್ಪರ್ಧೆಯಲ್ಲಿ ಕಂಚಿನ ಪದಕ ಗಳಿಸಿದ್ದಾರೆ. ನಿನ್ನೆ ನಡೆದ ಫೈನಲ್‌ನಲ್ಲಿ ಸಬೀರಾ ೪೦ ಗುರಿಗಳಲ್ಲಿ ೨೯ ಗುರಿಗಳನ್ನು ಹೊಡೆದರು. ೫೦ರಲ್ಲಿ ೪೦ ಗುರಿಗಳನ್ನು ಹೊಡೆದುರುಳಿಸಿದ ಅಮೆರಿಕದ ಕ್ಯಾರಿ ಗ್ಯಾರಿಸನ್, ಚಿನ್ನದ ಪದಕ ತಮ್ಮದಾಗಿಸಿಕೊಂಡರು. ಇಟಲಿಯ ಸೋಫಿಯಾ ಗೋರಿ ೫೦ ಗುರಿಗಳ ಪೈಕಿ ೩೯ ಗುರಿಗಳೊಂದಿಗೆ ಬೆಳ್ಳಿ ಪದಕ ಪಡೆದರು.

******